# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸೌರ ನೀತಿ 2014-21ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಸಂಸ್ಥೆಯಲ್ಲಿ ಲ್ಯಾಂಡ್ ಬ್ಯಾಂಕ್ ಸ್ಥಾಪಿಸುವ ಕುರಿತು.

ಓದಲಾಗಿದೆ:

1. ಸೌರ ವಿದ್ಯುತ್ ನೀತಿ 2014-21 ಅಧಿಸೂಚನೆ ಸಂಖ್ಯೆ: ಇಎನ್ 21 ವಿಎಸ್‌ಸಿ 2014 ದಿನಾಂಕ: 22.05.2014.
2. ಕರ್ನಾಟಕ ಭೂಕಂದಾಯ ಅಧಿನಿಯಮ (ತಿದ್ದುಪಡಿ), 2015 (ಕರ್ನಾಟಕ ಅಧಿನಿಯಮ 2015 ರ ಸಂಖ್ಯೆ: 31).
3. ಕಂದಾಯ ಇಲಾಖೆ ಸುತ್ತೋಲೆ ಸಂಖ್ಯೆ: ಆರ್‌ಡಿ 69 ಎಲ್‌ಜಿಸಿ 2015 ದಿನಾಂಕ:01.12.2015.

*******

ಪ್ರಸ್ತಾವನೆ:

ಕೇಂದ್ರ ಸರ್ಕಾರದ ನವ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಲಯವು ನ್ಯಾಷನಲ್ ಸೋಲಾರ್ ಮಿಷನ್ ಕಾರ್ಯಕ್ರಮದಡಿ 100000MW ರಷ್ಟು ಸಾಮರ್ಥ್ಯದ ಸೌರ ವಿದ್ಯುತ್ ಯೋಜನೆಗಳನ್ನು ಅನುಷ್ಠಾನಗೊಳಿಸುವ ಗುರಿ ಹೊಂದಿರುತ್ತದೆ. ಈ ಕಾರ್ಯಕ್ರಮದಡಿ ರಾಜ್ಯಕ್ಕೆ ಸರಿಸುಮಾರು 6000MW ಸಾಮರ್ಥ್ಯದ ಸೌರ ವಿದ್ಯುತ್ ಯೋಜನೆಗಳನ್ನು ಅನುಷ್ಠಾನಗೊಳಿಸುವ ಗುರಿಯನ್ನು ನಿಗಧಿಪಡಿಸಲಾಗಿದೆ.

ಸರ್ಕಾರವು ಸೌರ ವಿದ್ಯುಚ್ಛಕ್ತಿಯನ್ನು ಪ್ರೋತ್ಸಾಹಿಸಲು ಹಾಗೂ ರಾಜ್ಯಕ್ಕೆ ಕೇಂದ್ರದಿಂದ ನೀಡಿರುವ ಸೌರ ವಿದ್ಯುತ್ ಉತ್ಪಾದನೆಯ ಗುರಿಯನ್ನು ಸಾಧಿಸಲು ಮೇಲೆ ಓದಲಾದ (1)ರಲ್ಲಿ ಸೌರ ವಿದ್ಯುತ್ ನೀತಿ 2014-21ಅನ್ನು ಜಾರಿ ಮಾಡಿರುತ್ತದೆ. ಕ್ರೆಡಲ್ ವತಿಯಿಂದ ಈಗಾಗಲೇ ಸರಿಸುಮಾರು 2347ಮೆ.ವ್ಯಾ. ಸಾಮರ್ಥ್ಯದ (ಪಾವಗಡ ಸೋಲಾರ್ ಪಾರ್ಕ್ ಒಳಗೊಂಡಂತೆ) ಯೋಜನೆಗಳನ್ನು ಹಂಚಿಕೆ ನೀಡಿ ಅನುಷ್ಠಾನ ಕಾರ್ಯವು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. ಇಲ್ಲಿಯವರೆಗೆ 203ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಯೋಜನೆಗಳು ಮಾತ್ರ ಅನುಷ್ಠಾನಗೊಂಡಿರುತ್ತವೆ.

ಸೌರ ವಿದ್ಯುತ್ ಘಟಕಗಳನ್ನು ಉತ್ತೇಜಿಸುವ ಸಲುವಾಗಿ ನೀತಿಯ ಕಲಂ (16), (17) ಮತ್ತು (18) ರನ್ವಯ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸುವ ಅಭಿವೃದ್ಧಿದಾರರಿಗೆ ವಿವಿಧ ಉತ್ತೇಜನಗಳನ್ನು ಘೋಷಣೆ ಮಾಡಲಾಗಿರುತ್ತದೆ. ಸೌರ ನೀತಿಯನ್ವಯ ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಘೋಷಿಸಿರುವ ಉತ್ತೇಜನಗಳ ಸಂಬಂಧ ಈಗಾಗಲೇ ಕಂದಾಯ ಇಲಾಖೆರವರು ಮೇಲೆ ಓದಲಾದ (2) ಮತ್ತು (3)ರಲ್ಲಿ ಕ್ರಮ ಕೈಗೊಂಡಿರುತ್ತಾರೆ.

ಸೌರ ನೀತಿಯ ಕಲಂ (18)ರಲ್ಲಿ "A separate dedicated cell with staff drawn from revenue dept shall be created in KREDL, to ensure creation of Govt/Private land banks for development of solar projects on lease

basis including formulation of modalities, fees etc.," ಇದರಂತೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಲ್ಲಿ ಸೌರ ವಿದ್ಯುತ್ ಯೋಜನೆಗಳ ಸ್ಥಾಪನೆಗೆ ಅನುವು ಮಾಡಿಕೊಡುವ ಸಂಬಂಧ ಲ್ಯಾಂಡ್ ಬ್ಯಾಂಕ್‌ಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ.

ಕರ್ನಾಟಕ ಸೋಲಾರ್ ಪವರ್ ಡೆವಲೆಪ್‌ಮೆಂಟ್ (KSPDCL) ಸಂಸ್ಥೆಯು ರಾಜ್ಯದ ಪಾವಗಡ ತಾಲ್ಲೂಕು, ನಾಗಲಮಡಿಕೆ ಹೋಬಳಿಯ ವ್ಯಾಪ್ತಿಯಲ್ಲಿ ಸೋಲಾರ್ ಪಾರ್ಕ್ ಸ್ಥಾಪಿಸಲು ಆ ಮೂಲಕ ಸೌರ ವಿದ್ಯುತ್ ಉತ್ಪಾದನಾ ಘಟಕಗಳನ್ನು ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಈಗಾಗಲೇ ಭೂಮಿಯನ್ನು ಸೌರ ವಿದ್ಯುತ್ ಯೋಜನೆಗಳ ಅಭಿವೃದ್ಧಿಗಾಗಿ ಕರ್ನಾಟಕ ಭೂ ಸುಧಾರಣಾ ಅಧಿನಿಯಮ, 1961ರ ಪ್ರಕರಣ 109ರ ಪ್ರಕಾರ ನಿಯಮಾನುಸಾರ ಅನುಮತಿಯನ್ನು ಪಡೆದು, ಕರ್ನಾಟಕ ಭೂ ಸುಧಾರಣಾ ಅಧಿನಿಯಮದನ್ವಯ ಅವಶ್ಯಕವಾಗಿರುವ ಶಾಸನಬದ್ಧ ಅನುಮೋದನೆಗಳನ್ನು ಪಡೆದು ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸಲು ಜಮೀನುಗಳನ್ನು ಗುತ್ತಿಗೆ ಆಧಾರದ ಮೇಲೆ ಪಡೆಯಲು ಕ್ರಮ ಕೈಗೊಂಡಿದೆ.

2021ರ ವೇಳೆಗೆ ಸರಿಸುಮಾರು 6000 ಮೆ.ವ್ಯಾ. ಸಾಮರ್ಥ್ಯದ ಯೋಜನೆಗಳನ್ನು ಅನುಷ್ಠಾನಗೊಳಿಸುವ ಗುರಿ ಹೊಂದಲಾಗಿದ್ದು, ಅದಕ್ಕನುಸಾರವಾಗಿ ಸೌರ ವಿದ್ಯುತ್ ಅಭಿವೃದ್ಧಿದಾರರಿಗೆ ಹಂಚಿಕೆ ನೀಡಲಾಗಿದ್ದು, ಯೋಜನೆಗಳನ್ನು ಅನುಷ್ಠಾನಗೊಳಿಸಲು ಖಾಸಗಿ ಭೂಮಿಯನ್ನು ಗುತ್ತಿಗೆ ಆಧಾರದ ಮೇಲೆ ಖಾಸಗಿ ಅಭಿವೃದ್ಧಿದಾರರಿಗೆ ನೀಡಲು ಭೂ ಮಾಲೀಕರು ಆಸಕ್ತಿ ತೋರುತ್ತಿಲ್ಲ. ಆದರೆ ಭೂ ಮಾಲೀಕರು ಸರ್ಕಾರಿ ಸ್ವಾಮ್ಯದ ಸಂಸ್ಥೆಗೆ ಸ್ವ-ಇಚ್ಛೆಯಿಂದ ಇಂತಹ ಭೂಮಿಗಳನ್ನು ನೀಡಲು ಆಸಕ್ತಿ ತೋರುತ್ತಿರುವುದು ಗಮನಕ್ಕೆ ಬಂದಿರುತ್ತದೆ.

ಕ್ರೆಡಲ್ ಸಂಸ್ಥೆಯು ಭೂ ಮಾಲೀಕರಿಂದ ಪಡೆದಿರುವ ಭೂಮಿಗೆ ಜಿಲ್ಲಾಧಿಕಾರಿ, ಜಿಲ್ಲಾ ಕೃಷಿ ಅಧಿಕಾರಿ ಮತ್ತು ವ್ಯವಸ್ಥಾಪಕ ನಿರ್ದೇಶಕರು, ಕ್ರೆಡಲ್ ರವರು ಅಧ್ಯಯನ ಮಾಡಿ ವಾಸ್ತವ ಸ್ಥಿತಿ ಗಮನದಲ್ಲಿಟ್ಟುಕೊಂಡು ಗುತ್ತಿಗೆ ದರ ನಿಗದಿ ಮಾಡುವುದು.

ಖಾಸಗಿ ಅಭಿವೃದ್ಧಿದಾರರಿಂದ ಸೌರ ವಿದ್ಯುತ್ ಯೋಜನೆಗಳನ್ನು ಅನುಷ್ಠಾನಗೊಳಿಸಲು ಅನುವು ಮಾಡಿಕೊಡುವ ದೃಷ್ಟಿಯಿಂದ ಹಾಗೂ ಸೌರ ನೀತಿಯನ್ವಯ ಕಲಂ (18)ರಲ್ಲಿ ಉಲ್ಲೇಖಿಸಿರುವಂತೆ ಕಂದಾಯ ಇಲಾಖೆಯ ಸಹಕಾರದೊಂದಿಗೆ ಕ್ರೆಡಲ್ ಸಂಸ್ಥೆಯು ಲ್ಯಾಂಡ್ ಬ್ಯಾಂಕ್ ಸ್ಥಾಪಿಸುವ ಉದ್ದೇಶದಿಂದ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 66 ವಿಎಸ್‌ಇ 2016,**

**ಬೆಂಗಳೂರು, ದಿನಾಂಕ:05.10.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸೌರ ನೀತಿ 2014-21ರನ್ವಯ, ಖಾಸಗಿ ಭೂಮಿಗಳನ್ನು ಸೌರ ವಿದ್ಯುತ್ ಉತ್ಪಾದನಾ ಘಟಕಗಳನ್ನು ಅಳವಡಿಸುವ ಉದ್ದೇಶದಿಂದ, ಕರ್ನಾಟಕ ಭೂ ಸುಧಾರಣಾ ಅಧಿನಿಯಮದನ್ವಯ ಶಾಸನಬದ್ಧ ಅನುಮೋದನೆಗಳ ನಂತರ ಕ್ರೆಡಲ್ ಸಂಸ್ಥೆಯು ಗುತ್ತಿಗೆ ಆಧಾರದ ಮೇಲೆ ಜಮೀನುಗಳನ್ನು

ಪಡೆದು, ಸದರಿ ಭೂಮಿಗಳನ್ನು ಖಾಸಗಿ ಸೌರ ವಿದ್ಯುತ್ ಅಭಿವೃದ್ಧಿದಾರರಿಗೆ ನಿಯಮಾನುಸಾರ ಉಪ–ಗುತ್ತಿಗೆಗೆ ನೀಡಲು ಸರ್ಕಾರವು ಅನುಮೋದಿಸಿದೆ.

ಭೂ ಮಾಲೀಕರಿಗೆ ಗುತ್ತಿಗೆ ಶುಲ್ಕವನ್ನು ಸಂಬಂಧಿಸಿದ ಜಿಲ್ಲಾಧಿಕಾರಿಯು ನಿಗದಿ ಮಾಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ.

ಇವರಿಗೆ,
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯ ಪತ್ರ ಪ್ರಕಟಣೆಗಾಗಿ.

ಪ್ರತಿಗಳು:–

1. ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಕೆ.ಪಿ.ಟಿ.ಸಿ.ಎಲ್/ಬೆಸ್ಕಾಂ/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ/ಸೆಸ್ಕ್.
4. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, "ಶಾಂತಿ ಗೃಹ" ಪ್ಯಾಲೆಸ್ ರಸ್ತೆ, ಭಾರತ್ ಸ್ಕೌಟ್ಸ್ ಅಂಡ್ ಗೈಡ್ಸ್ ಬಿಲ್ಡಿಂಗ್, ಬೆಂಗಳೂರು–560 001.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೆ.ಎಸ್.ಪಿ.ಡಿ.ಸಿ.ಎಲ್, ಬಳ್ಳಾರಿ ರಸ್ತೆ, ಬೆಂಗಳೂರು.
6. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
7. ನಿರ್ದೇಶಕರು(ಆರ್ಥಿಕ), ಅಪರ ನಿರ್ದೇಶಕರು(ಇ.ಎಂ.ಸಿ), ಜಂಟಿ ನಿರ್ದೇಶಕರು(ಎನ್.ಸಿ.ಇ.), ಜಂಟಿ ನಿರ್ದೇಶಕರು(ಯೋಜನೆ), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
10. ಶಾಖೆ ರಕ್ಷಾ ಕಡತ/ಹೆಚ್ಚುವರಿ ಪ್ರತಿ.